# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆಗುರುತಿಲ್ಲದ ಪ್ರಶ್ನೆಸಂಖ್ಯೆ | 417 |
| ಮಾನ್ಯ ಸದಸ್ಯರ ಹೆಸರು | ಶ್ರೀಎಂ.ಎಲ್. ಅನಿಲ್ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 10-07-2023 |
| ಉತ್ತರಿಸುವ ಸಚಿವರು | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಆರೋಗ್ಯ ಇಲಾಖೆಯಲ್ಲಿ ಆರೋಗ್ಯ ನಿರೀಕ್ಷಣಾಧಿಕಾರಿ ಹುದ್ದೆಗಳು ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮವೇನು; (ಸಂಪೂರ್ಣವಾದ ಮಾಹಿತಿ ನೀಡುವುದು) | ಬಂದಿದೆ.<br><br>ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ 2017ನೇ ಸಾಲಿನಲ್ಲಿ 465 ಕಿರಿಯ ಆರೋಗ್ಯ ಸಹಾಯಕರು/ಆರೋಗ್ಯ ನಿರೀಕ್ಷಣಾಧಿಕಾರಿ ಹುದ್ದೆಗಳನ್ನು ವಿಶೇಷ ನೇಮಕಾತಿ ಸಮಿತಿ ಮುಖಾಂತರ ಭರ್ತಿ ಮಾಡಲಾಗಿರುತ್ತದೆ.<br><br>ಮುಂದುವರೆದು, ಇಲಾಖೆಯಲ್ಲಿ ಖಾಲಿ ಇರುವ 2692 ಆರೋಗ್ಯ ನಿರೀಕ್ಷಣಾಧಿಕಾರಿಗಳ ಹುದ್ದೆಗಳನ್ನು ಭರ್ತಿ ಮಾಡುವ ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಇವರಿಂದ ಸ್ವೀಕೃತವಾಗಿರುವ ಪ್ರಸ್ತಾವನೆಯು ಆರ್ಥಿಕ ಇಲಾಖೆಯಲ್ಲಿ ಪರಿಶೀಲನೆಯಲ್ಲಿರುತ್ತದೆ. |
| ಆ | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಕುಟುಂಬ ಕಲ್ಯಾಣ ಕಾರ್ಯಕ್ರಮಗಳನ್ನು ಜನ ಸಾಮಾನ್ಯರಿಗೆ ತಲುಪಿಸುವ ಆರೋಗ್ಯ ನಿರೀಕ್ಷಣಾಧಿಕಾರಿ ಹುದ್ದೆಗಳ ಭರ್ತಿಗೆ ಆರೋಗ್ಯ ಇಲಾಖೆಯಿಂದ ಪ್ರಸ್ತಾವನೆ ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ; ಸದರಿ ಹುದ್ದೆಗಳ ಭರ್ತಿಗೆ ಆರ್ಥಿಕ ಇಲಾಖೆಯಿಂದ ಯಾವ ಕ್ರಮ ಕೈಗೊಳ್ಳಲಾಗಿದೆ; (ಸಂಪೂರ್ಣವಾದ ಮಾಹಿತಿ ನೀಡುವುದು) | |
| ಇ | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ 5944 ಆರೋಗ್ಯ ನಿರೀಕ್ಷಣಾಧಿಕಾರಿ ಹುದ್ದೆಗಳು ಮಂಜೂರಾಗಿದ್ದು, 2692 ಹುದ್ದೆಗಳು ಖಾಲಿ ಇದ್ದು ಇದರಿಂದ ಶೇಕಡ 50 ರಷ್ಟು ಹುದ್ದೆಗಳು ಖಾಲಿ ಇರುವುದರಿಂದ ಕ್ಷೇತ್ರ ಮಟ್ಟದಲ್ಲಿ ಆರೋಗ್ಯ ಸೇವೆಗಳನ್ನು ಜನ ಸಾಮಾನ್ಯರಿಗೆ ತಲುಪಿಸಲು ಸಾಧ್ಯವಾಗುತ್ತಿದೆಯೇ: 7 ವರ್ಷಗಳಿಂದ ಸದರಿ ಹುದ್ದೆಗಳ ನೇಮಕಾತಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು: (ಸಂಪೂರ್ಣವಾದ ಮಾಹಿತಿ ನೀಡುವುದು) | |

| | | |
|---|---|---|
| ಈ | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಕ್ಷೇತ್ರ ಮಟ್ಟದ ಆರೋಗ್ಯ ನಿರೀಕ್ಷಣಾಧಿಕಾರಿ ಹುದ್ದೆಗಳು ಖಾಲಿ ಇರುವುದರಿಂದ ನೀರಿನ ಗುಣಮಟ್ಟದ ಪರೀಕ್ಷೆ, ಹಾಗೂ ಆರೋಗ್ಯ ಇಲಾಖೆಯ ಇನ್ನಿತರ ಕಾರ್ಯಕ್ರಮಗಳಿಗೆ ತೊಂದರೆಯಾಗುತ್ತಿರುವುದು ಮತ್ತು ಯಾವುದೇ ರೀತಿಯ ಆರೋಗ್ಯ ಸೇವೆಗಳ ಬಗ್ಗೆ ಸಾರ್ವಜನಿಕರಿಗೆ ಮಾಹಿತಿ ತಲುಪದಿರುವುದು ನಿಜವೇ; ಆರೋಗ್ಯ ಸೇವೆಯನ್ನು ಜನಸಾಮಾನ್ಯರಿಗೆ ತಲುಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ಸಂಪೂರ್ಣವಾದ ಮಾಹಿತಿ ನೀಡುವುದು) | ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ಖಾಲಿ ಇರುವ ಆರೋಗ್ಯ ನಿರೀಕ್ಷಣಾಧಿಕಾರಿ ಹುದ್ದೆಗಳಿಗೆ ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿರುವ ಆರೋಗ್ಯ ನಿರೀಕ್ಷಣಾಧಿಕಾರಿಗಳಿಗೆ ಹೆಚ್ಚುವರಿ ಕಾರ್ಯ ಹಂಚಿಕೆ ಮಾಡಿ ಜನಸಾಮಾನ್ಯರಿಗೆ ಆರೋಗ್ಯ ಸೇವೆಯಲ್ಲಿ ಯಾವುದೇ ತೊಂದರೆಯಾಗದಂತೆ ಕ್ರಮವಹಿಸಲಾಗಿದೆ. |

ಸಂಖ್ಯೆ: ಆಕುಕ 173 ಹೆಚ್‌ಎಸ್‌ಎಂ 2023

(ದಿನೇಶ್ ಗುಂಡೂರಾವ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು